All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

17.04.2025 2.30 P.M.

***************

ಮುಖ್ಯಾಂಶಗಳು

- ಸಾಮಾಜಿಕ, ಶೈಕ್ಷಣಿಕ ಸಮೀಕ್ಷಾ ವರದಿ ಜಾರಿ ಕುರಿತು ವಿಶೇಷ ಸಂಪುಟ ಸಭೆಯಲ್ಲಿ ಇಂದು ಮಹತ್ವದ ಚರ್ಚೆ
- ಮುಂದುವರೆದ ಲಾರಿ ಮುಷ್ಕರ ; ಅಗತ್ಯ ವಸ್ತುಗಳ ಪೂರೈಕೆಯಲ್ಲಿ ವ್ಯತ್ಯಯ
- ರಾಜ್ಯಾದ್ಯಂತ ಭತ್ತ, ಬಿಳಿ ಜೋಳ ಖರೀದಿಗೆ ಸರ್ಕಾರದಿಂದ ಚಾಲನೆ
- ಇಂದು ವಿಶ್ವ ಹಿಮೋಫಿಲಿಯಾ ದಿನ ; ಎಲ್ಲೆಡೆ ಜಾಗೃತಿ ಅಭಿಯಾನ

***************

ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷಾ ವರದಿ ಜಾರಿಗೊಳಿಸುವ ಸಂಬಂಧ ಅನುಸರಿಸಬಹುದಾದ ಮುಂದಿನ ಕ್ರಮ ಕುರಿತು ವಿಶೇಷ ಸಂಪುಟ ಸಭೆ ಇಂದು ಚರ್ಚಿಸಲಿದೆ.

ಸಮೀಕ್ಷಾ ವರದಿಯನ್ನು ಕಳೆದ ವಾರ ನಡೆದ ಸಂಪುಟ ಸಭೆಯಲ್ಲಿ ಮಂಡಿಸಲಾಗಿದ್ದು, ಅಧ್ಯಯನ ನಡೆಸಿ ಸ್ಪಷ್ಟ ಅಭಿಪ್ರಾಯ ಮಂಡಿಸುವಂತೆ ಸಚಿವರಿಗೆ ಸೂಚನೆ ನೀಡಲಾಗಿದೆ.

ಕಾಂತರಾಜು ಮತ್ತು ಜಯಪ್ರಕಾಶ್ ಹೆಗಡೆ ಸಲ್ಲಿಸಿರುವ ಸಮೀಕ್ಷಾ ವರದಿಯನ್ನು ಜಾರಿಗೊಳಿಸಲು ಸರ್ಕಾರ ಮುಂದಾಗಿದ್ದು, ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅಧ್ಯಕ್ಷತೆಯಲ್ಲಿ ನಡೆಯಲಿರುವ ವಿಶೇಷ ಸಂಪುಟ ಸಭೆಯಲ್ಲಿ ಮಹತ್ವದ ಚರ್ಚೆಯಾಗಲಿದೆ.

ಈ ನಡುವೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಈ ಕುರಿತು ಪ್ರತಿಕ್ರಿಯೆ ನೀಡಿದ್ದು, ಮುಖ್ಯಮಂತ್ರಿ ಸೇರಿದಂತೆ ಹಲವು ಸಚಿವರು ಇದು ಜಾತಿ ಸಮೀಕ್ಷೆಯಲ್ಲ ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಎಂದು ಹೇಳಿ ಜನರ ಗಮನವನ್ನು ಬೇರೆಡೆಗೆ ಸೆಳೆಯುತ್ತಿದ್ದಾರೆ.

ಈಗಾಗಲೇ ವರದಿಯ ಪ್ರಮುಖ ಅಂಶಗಳು ಬಹಿರಂಗವಾಗಿದ್ದು, ಇದರ ಹೊಣೆಯನ್ನು ಸರ್ಕಾರವೇ ಹೊರಬೇಕು. ಸಚಿವ ಸಂಪುಟದಲ್ಲಿ ವರದಿ ಜಾರಿಗೊಳಿಸುವ ಪ್ರಯತ್ನ ಮಾಡಲೇಬಾರದು ಎಂದು ಹೇಳಿದ್ದಾರೆ.

***************

ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸಮೀಕ್ಷಾ ವರದಿಯನ್ನು ಸಚಿವ ಸಂಪುಟ ವಿವರವಾಗಿ ಚರ್ಚಿಸಿ ಸರ್ಕಾರ ಸೂಕ್ತ ನಿರ್ಧಾರ ಕೈಗೊಳ್ಳಲಿದೆ ಎಂದು ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

ಕಲಬುರಗಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವರದಿ ಬಗ್ಗೆ ಸರ್ಕಾರ ಮತ್ತು ಸಾರ್ವಜನಿಕ ವಲಯದಲ್ಲಿ ವಿರೋಧ ವ್ಯಕ್ತವಾಗುತ್ತಿರುವ ಬಗ್ಗೆ ಪ್ರತಿಕ್ರಿಯೆ ನೀಡಿದ ಅವರು, ಎಲ್ಲರಿಗೂ ಅಭಿಪ್ರಾಯ ವ್ಯಕ್ತಪಡಿಸಲು ಅವಕಾಶವಿದೆ. ಅಂತಿಮವಾಗಿ ಸಚಿವ ಸಂಪುಟದಲ್ಲಿ ವಿಸ್ತರವಾಗಿ ಚರ್ಚೆ ಮಾಡಿ ವರದಿ ಜಾರಿ ಬಗ್ಗೆ ಸರ್ಕಾರವೇ ತೀರ್ಮಾನಕ್ಕೆ ಬರಲಿದೆ ಎಂದು ಮಲ್ಲಿಕಾರ್ಜುನ ಖರ್ಗೆ ಹೇಳಿದ್ದಾರೆ.

***************

ಲಾರಿ ಮುಷ್ಕರ ೩ನೇ ದಿನಕ್ಕೆ ಕಾಲಿಟ್ಟಿದ್ದು, ಲಾರಿ ಮಾಲೀಕರ ಸಂಘ, ಏಜೆಂಟ್‌ಗಳ ಸಂಘ ಮುಷ್ಕರ ಮುಂದುವರೆಸಲು ನಿರ್ಧರಿಸಿದೆ.

ಡೀಸಲ್ ಬೆಲೆ ಏರಿಕೆ ಹಿಂದಕ್ಕೆ ಪಡೆಯಬೇಕು. ಸಂಘದ ಇತರ ಬೇಡಿಕೆಗಳನ್ನು ಜಾರಿಗೊಳಿಸುವ ಬಗ್ಗೆ ಸ್ಪಷ್ಟ ಭರವಸೆ ನೀಡಬೇಕು ಎಂದು ಲಾರಿ ಮಾಲೀಕರ ಸಂಘದ ಅಧ್ಯಕ್ಷ ಜಿ.ಆರ್. ಷಣ್ಮುಗಪ್ಪ ತಿಳಿಸಿದ್ದಾರೆ.

***************

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ದಾವಣಗೆರೆ ಜಿಲ್ಲೆಯಲ್ಲಿ ರೈತರಿಂದ ಭತ್ತ ಮತ್ತು ಬಿಳಿಜೋಳ ಖರೀದಿಗೆ ನೋಂದಣಿ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ಪ್ರಭಾರ ಜಿಲ್ಲಾಧಿಕಾರಿ ಡಾ.ಸುರೇಶ್ ಇಟ್ನಾಳ್ ತಿಳಿಸಿದ್ದಾರೆ. ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಮೂಲಕ ಪ್ರಸಕ್ತ ಸಾಲಿನ ಹಿಂಗಾರು ಹಂಗಾಮಿನಲ್ಲಿ ಭತ್ತ ಹಾಗೂ ಬಿಳಿ ಜೋಳವನ್ನು ರೈತರಿಂದ ಖರೀದಿಸಲು ಅವಕಾಶ ಕಲ್ಪಿಸಲಾಗಿದೆ. ಜಿಲ್ಲಾ ವ್ಯಾಪ್ತಿಯಲ್ಲಿನ ಬಿತ್ತನೆ ಪ್ರಮಾಣ ಆಧರಿಸಿ ಭತ್ತ ಪ್ರತಿ ಕ್ವಿಂಟಾಲ್‌ಗೆ ೨ ಸಾವಿರದ ೩೦೦ ರೂಪಾಯಿ ಹಾಗೂ ಹೈಬ್ರಿಡ್ ಜೋಳವನ್ನು ಪ್ರತಿ ಕ್ವಿಂಟಾಲ್‌ಗೆ ೩ ಸಾವಿರದ ೩೭೧ ರೂಪಾಯಿಯಂತೆ ಖರೀದಿಸಲಾಗುತ್ತಿದ್ದು, ಮೇ ೩೧ ರ ವರೆಗೆ ನೋಂದಣಿಗೆ ಅವಕಾಶ ಕಲ್ಪಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಹಾವೇರಿ ಜಿಲ್ಲೆಯಲ್ಲಿ ೬೦ ಸಾವಿರ ಕ್ವಿಂಟಾಲ್ ಜೋಳ ಖರೀದಿಸಲು ನಿರ್ಧರಿಸಲಾಗಿದೆ ಎಂದು ಜಿಲ್ಲಾಧಿಕಾರಿ ಡಾ. ವಿಜಯ ಮಹಂತೇಶ ದಾನಮ್ಮನವರ್ ತಿಳಿಸಿದ್ದಾರೆ. ಖರೀದಿಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಲಾಗಿದೆ. ರೈತರ ಹಿತವನ್ನು ಗಮನದಲ್ಲಿಟ್ಟುಕೊಂಡು ಎಪಿಎಂಸಿ ಮೂಲಕವೇ ಜೋಳ ಸಂಗ್ರಹ ಮಾಡಲಾಗುತ್ತಿದೆ ಎಂದು ಅವರು ಹೇಳಿದರು.

***************

ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಯಿಂದಾಗಿ ಜನರು ಬಾರಿ ಬವಣೆ ಪಡುತ್ತಿದ್ದಾರೆ ಎಂದು ಕಾಂಗ್ರೆಸ್ ಮುಖಂಡ ಕೃಷ್ಣ ಬೈರೇಗೌಡ ಅಪಾದಿಸಿದ್ದಾರೆ.

ಬೆಂಗಳೂರಿನ ಫ್ರೀಡಂ ಪಾರ್ಕ್‌ನಲ್ಲಿ ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದ ಪ್ರತಿಭಟನಾಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಜನಸಾಮಾನ್ಯರು ಬಳಸುವ ಬೆಳೆ-ಕಾಳು, ಎಣ್ಣೆ, ಅಡುಗೆ ಅನಿಲ, ಸಿಮೆಂಟ್, ಸ್ಟೀಲ್ ಎಲ್ಲವೂ ವಿಪರೀತ ದುಬಾರಿಯಾಗಿದ್ದು, ಜನಜೀವನದ ಮೇಲೆ ಗಂಭೀರ ಪರಿಣಾಮ ಬಿರುತ್ತಿದೆ.

ಜನರ ಬಗ್ಗೆ ಕಾಳಜಿ-ಕಳಕಳಿಯಿದ್ದಲ್ಲಿ ಅಗತ್ಯ ವಸ್ತುಗಳ ಬೆಲೆ ಏರಿಕೆಯನ್ನು ತಡೆಗಟ್ಟಬೇಕು ಎಂದು ಕೃಷ್ಣ ಬೈರೇಗೌಡ ಕೇಂದ್ರ ಸರ್ಕಾರವನ್ನು ಆಗ್ರಹಿಸಿದ್ದಾರೆ.

ಧ್ವನಿ : ಕೃಷ್ಣ ಬೈರೇಗೌಡ

ಬಾಗಲಕೋಟೆಯಲ್ಲಿ ಬಿಜೆಪಿ ನಾಯಕ, ಸಂಸದ ಜಗದೀಶ್ ಶೆಟ್ಟರ್ ಮಾತನಾಡಿ, ರಾಜ್ಯ ಸರ್ಕಾರದ ಮಿತಿಮೀರಿದ ದರ ಏರಿಕೆಯಿಂದಾಗಿ ಜನರು ತೊಂದರೆಗೆ ಒಳಗಾಗಿದ್ದಾರೆ ಎಂದು ದೂರಿದ್ದಾರೆ.

***************

ಇಂದು ವಿಶ್ವ ಹಿಮೋಫಿಲಿಯಾ ದಿನ.

ಮಹಿಳೆಯರು ಮತ್ತು ಬಾಲಕಿಯರಲ್ಲಿಯೂ ರಕ್ತಸ್ರಾವ ಎಂಬುದು ಈ ವರ್ಷದ ಘೋಷ ವಾಕ್ಯವಾಗಿದೆ.ಈ ಕುರಿತು ಜಾಗೃತಿ ಮೂಡಿಸುವುದು ಹಾಗೂ ಮಹಿಳೆಯರ ಜೀವನ ಮಟ್ಟ ಸುಧಾರಿಸುವ ಉದ್ದೇಶ ಹೊಂದಲಾಗಿದೆ.

ಈ ನಿಟ್ಟಿನಲ್ಲಿ ವಿಶ್ವ ಆರೋಗ್ಯ ಸಂಸ್ಥೆ ಹಾಗೂ ಇತರೆ ಸಂಘ ಸಂಸ್ಥೆಗಳು ನಿರಂತರ ಅಭಿಯಾನ ಕೈಗೊಳ್ಳುತ್ತಿದೆ. ಭಾರತದಲ್ಲಿಯೂ ಇಂದು ವಿಶೇಷ ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಬೆಂಗಳೂರು, ತುಮಕೂರು ಸೇರಿದಂತೆ ರಾಜ್ಯದ ವಿವಿದೆಡೆ ಒಂದು ತಿಂಗಳು ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದ್ದು, ಈ ಮೂಲಕ ಜನರಲ್ಲಿ ಅರಿವು ಮೂಡಿಸಲಾಗುತ್ತದೆ.

***************

ಅಗ್ನಿಪಥ್ ಯೋಜನೆಯ ಅಗ್ನಿವೀರರ ೫ನೇ ತಂಡದ ತರಬೇತಿ ಕಾರ್ಯಕ್ರಮ ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಬೆಂಗಳೂರಿನಲ್ಲಿ ತರಬೇತಿ ಮುಗಿಸಿದ ೪೪೦ ಯೋಧರು ಪರೀಕ್ಷೆಗಾಗಿ ಭಾರತೀಯ ಸೇನೆಯ ಅವಧಿ ಆಯ್ಕೆಗಾಗಿ ವಿಶೇಷ ಪಡೆಯ ಘಟಕಕ್ಕೆ ತೆರಳುತ್ತಾರೆ.

ಈ ಸಂದರ್ಭದಲ್ಲಿ ಏರ್ ಮಾರ್ಷಲ್ ತೇಜ್ ಬೀರ್ ಸಿಂಗ್ ಮಾತನಾಡಿ, ಇಮಾಂದಾರಿ, ವಫದಾರಿ, ಬಹದ್ದೂರಿ ಎಂಬ ನೀತಿಯನ್ನು ಅಗ್ನಿವೀರರು ಅಳವಡಿಸಿಕೊಳ್ಳಬೇಕು ಎಂದು ಕಿವಿ ಮಾತು ಹೇಳಿದರು.

***************

ಬೆಂಗಳೂರು ಗ್ರಾಮಾಂತರ ಜಿಲ್ಲೆ ಹಾಗೂ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದಲ್ಲಿ ಜಲಜೀವನ್ ಮಿಷನ್, ಅಮೃತ ಯೋಜನೆ, ರಸ್ತೆ ಅಭಿವೃದ್ಧಿ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ೧೪೭ ಕೋಟಿ ರೂಪಾಯಿ ವಿನಿಯೋಗಿಸಲಾಗಿದೆ ಎಂದು ಸಂಸದ ಡಾ. ಕೆ. ಸುಧಾಕರ್ ಹೇಳಿದ್ದಾರೆ.

ನೆಲಮಂಗಲ ತಾಲೂಕಿನಲ್ಲಿ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಅವರು ಮಾತನಾಡಿದರು. ಸಂಸದರ ಅನುದಾನದಲ್ಲಿ ನೆಲಮಂಗಲ ಕ್ಷೇತ್ರದ ಅಭಿವೃದ್ಧಿಗೆ ೭೦ ಲಕ್ಷ ರೂಪಾಯಿ ನೀಡಲಾಗುತ್ತಿದೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕೆರೆಗಳಿಗೆ ನೀರು ತುಂಬಿಸುವ ವೃಷಭಾವತಿ, ಕೆ.ಸಿ. ವ್ಯಾಲಿ, ಎಚ್.ಎನ್. ವ್ಯಾಲಿ ನೀರನ್ನು ಮೂರು ಹಂತಗಳಲ್ಲಿ ಸಂಸ್ಕರಿಸಿ ಬಿಡುವುದು ಅಗತ್ಯವಾಗಿದೆ ಎಂದು ಸುಧಾಕರ್ ತಿಳಿಸಿದ್ದಾರೆ.

***************

ಮಂಡ್ಯ ಜಿಲ್ಲೆಯ ಮದ್ದೂರಿನಲ್ಲಿ ರೇಷ್ಮೆ ಮಾರುಕಟ್ಟೆ ನಿರ್ಮಿಸಲು ಅಗತ್ಯಕ್ರಮ ಕೈಗೊಳ್ಳಲಾಗುವುದು ಎಂದು ಶಾಸಕ ಕೆ.ಎಂ. ಉದಯ್ ಭರವಸೆ ನೀಡಿದ್ದಾರೆ. ಮದ್ದೂರಿನಲ್ಲಿ

ನಡೆದ ತಾಲೂಕು ಮಟ್ಟದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮದ್ದೂರು ತಾಲೂಕಿನಲ್ಲಿ ರೈತರು ಹೆಚ್ಚಾಗಿ ರೇಷ್ಮೆ ಬೆಳೆಯುತ್ತಿದ್ದು, ರೈತರ ಅನುಕೂಲಕ್ಕಾಗಿ ಸ್ಥಳೀಯ ಮಟ್ಟದಲ್ಲಿ ಅವರಿಗೆ ಮಾರುಕಟ್ಟೆ, ಸೌಲಭ್ಯ ಒದಗಿಸಲು ಮುಂದಿನ ದಿನಗಳಲ್ಲಿ ಮದ್ದೂರಿನಲ್ಲಿಯೇ ರೇಷ್ಮೆ ಮಾರುಕಟ್ಟೆ ಸ್ಥಾಪಿಸಲಾಗುವುದು ಎಂದು ಶಾಸಕ ಉದಯ್ ಹೇಳಿದ್ದಾರೆ.

***************

ಜಾನುವಾರುಗಳ ಕಾಲುಬಾಯಿ ರೋಗ ನಿಯಂತ್ರಣಕ್ಕಾಗಿ ೭ನೇ ಸುತ್ತಿನ ಲಸಿಕಾ ಅಭಿಯಾನವನ್ನು ರಾಜ್ಯಾದ್ಯಂತ ಇದೇ ೨೧ ರಿಂದ ಜೂನ್ ೪ರವರೆಗೆ ಹಮ್ಮಿಕೊಳ್ಳಲು ಪಶು ಸಂಗೋಪನಾ ಇಲಾಖೆ ನಿರ್ಧರಿಸಿದೆ.

ಈಗಾಗಲೇ ಪಶು ವೈದ್ಯಾಧಿಕಾರಿಗಳು ಜಿಲ್ಲಾ ಮಟ್ಟದಲ್ಲಿ ಅಗತ್ಯ ಸಿದ್ಧತೆ ಮಾಡಿಕೊಳ್ಳುತ್ತಿದ್ದಾರೆ. ಯಾದಗಿರಿ ಜಿಲ್ಲೆಯಲ್ಲಿ ಅಭಿಯಾ ಯಶಸ್ವಿಗೊಳಿಸಲು ಅಧಿಕಾರಿಗಳು ಕ್ರಮವಹಿಸಬೇಕೆಂದು ಯಾದಗಿರಿ ಅಪರ ಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೌಡ ಹೇಳಿದ್ದಾರೆ.

ಯಾದಗಿರಿಯಲ್ಲಿ ಅಭಿಯಾನದ ಪೂರ್ವ ಸಿದ್ಧತೆ ಕುರಿತು ಮಾತನಾಡಿದ ಅವರು, ರೈತರಿಗೆ ಆರ್ಥಿಕ ಸಂಕಷ್ಟ ಉಂಟು ಮಾಡುವ ಕಾಲುಬಾಯಿ ರೋಗ ನಿಯಂತ್ರಿಸಲು ಇಲಾಖೆ ಕೈಗೊಂಡಿರುವ ಕ್ರಮಗಳಿಗೆ ರೈತರು ಸಹಕರಿಸಬೇಕು.

***************

ರಾಜ್ಯದ ಹಲವು ಜಿಲ್ಲೆಗಳಲ್ಲಿ ಪೂರ್ವ ಮುಂಗಾರು ಋತು ಮುಂದುವರಿಯಲಿದೆ. ಚಂಡಮಾರುತದ ಹಿನ್ನಲೆ, ಇಂದು ೧೮ ಜಿಲ್ಲೆಗಳಿಗೆ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ನಾಳೆಯಿಂದ ಮಳೆ ಪ್ರಮಾಣ ಕಡಿಮೆಯಾದರೂ ಕೆಲವು ಜಿಲ್ಲೆಗಳಿಗೆ ಮಳೆ ಮುನ್ಸೂಚನೆ ನೀಡಲಾಗಿದೆ.

***************

ಸಂಕ್ಷಿಪ್ತ ಸುದ್ದಿಗಳು

- ಸುಪ್ರೀಂಕೋರ್ಟ್‌ನಲ್ಲಿ ಹಿರಿಯ ವಕೀಲರಾಗಿ ಸೇವೆ ಸಲ್ಲಿಸುತ್ತಿದ್ದ ಧಾರವಾಡ ಮೂಲದ ಶರತ್ ಜವಳಿ ನಿಧನಕ್ಕೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಂತಾಪ ವ್ಯಕ್ತಪಡಿಸಿದ್ದಾರೆ.
- ಕೇಂದ್ರ ಸರ್ಕಾರದ ಬೆಲೆ ಏರಿಕೆ ನೀತಿಯನ್ನು ಖಂಡಿಸಿ ಬಂಗಾರಪೇಟೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಶಾಸಕ ಎಸ್.ಎನ್. ನಾರಾಯಣಸ್ವಾಮಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿದರು.
- ರಾಜ್ಯಾದ್ಯಂತ ಇಂದು ಕೂಡ ಸಿಇಟಿ ಪರೀಕ್ಷೆ ಮುಂದುವರೆದಿದ್ದು, ಗಣಿತ ಮತ್ತು ಜೀವಶಾಸ್ತ್ರ ಪರೀಕ್ಷೆಗಳು ನಡೆಯುತ್ತಿವೆ. ವೆಬ್‌ಕ್ಯಾಸ್ಟಿಂಗ್ ಮೂಲಕ ಎಲ್ಲ ಪರೀಕ್ಷಾ ಕೇಂದ್ರಗಳ ಮೇಲೆ ನಿಗಾ ಇಡಲಾಗಿದೆ.

*******ಮುಕ್ತಾಯ*******